ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ಬೆಂಗಳೂರು. (ಆಪ್ತ ಶಾಖೆ)
30 JAN 2017
ಸಂಖ್ಯೆ: 7378

ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಕೇಂದ್ರ ಕಛೇರಿ-1), ಬೆಂಗಳೂರು (ಆಪ್ತ ಶಾಖೆ)
01 FEB 2017
ಸಂಖ್ಯೆ: 11002

2 - FEB 2017
ಸಂಖ್ಯೆ: 8
ವಾಣಿಜ್ಯ ತೆರಿಗೆ ಆಯುಕ್ತರವರ ಕಛೇರಿ, ಗಾಂಧಿನಗರ, ಬೆಂಗಳೂರು-9

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ವ್ಯಾಪ್ತಿಯ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಮುಖ್ಯ ಜಾಗೃತ ಅಧಿಕಾರಿ ( Chief Vigilance Officer) ಹಾಗೂ ವಿಭಾಗೀಯ ಮಟ್ಟದ ಜಾಗೃತಿ ಅಧಿಕಾರಿ (Vigilance Officer) ಯನ್ನು ನೇಮಿಸುವ ಬಗ್ಗೆ.

* * *

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯ 2016, ದಿನಾಂಕ;14.03.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯ 2016, ದಿನಾಂಕ;22.06.2016.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ದಿನಾಂಕ 14.03.2016ರ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti-Corruption Bureau)ಸೃಜಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 22.06.2016ರ ಸರ್ಕಾರಿ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿನಾಂಕ:14.03.2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7 ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ / ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿಪತವಾದ ನಿಗಮ / ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ / ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶದ ಆದೇಶ ಭಾಗದ ಕಂಡಿಕೆ 1(3)ರಲ್ಲಿ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ / ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ / ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ, ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಛೇರಿಗಳನ್ನು ಹೊಂದಿದ್ದು, ಸದರಿ ಕಛೇರಿಗಳಲ್ಲಿ ಗಣನೀಯ ಸಿಬ್ಬಂದಿ(Resonable Strength) ಇದ್ದಲ್ಲಿ, ಆ ವಿಭಾಗ / ಜಿಲ್ಲಾಮಟ್ಟದ ಕಛೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಸದರಿ ವಿಭಾಗ / ಜಿಲ್ಲಾ ಮಟ್ಟದ ಕಛೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (Officer next in Seniority) ಸದರಿ ಜಾಗೃತ ಕೋಶದ ಜಾಗೃತ ಅಧಿಕಾರಿ(Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿರುತ್ತದೆ.

ಪುಟ 2ಕ್ಕೆ